ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಶುಕ್ರವಾರ, ದಿನಾಂಕ : 05 ನೇ ಫೆಬ್ರುವರಿ, 2021

ಖಾಸಗಿ ಬಸ್ಸುಗಳಲ್ಲಿ ಸರಕು ಸಾಗಾಣಿಕೆ ಕುರಿತು

ಶ್ರೀ ಎನ್. ರವಿಕುಮಾರ್(ವಿಧಾನಸಭೆಯಿಂದ ಚುನಾಯಿತರಾದವರು) -

465 (499) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ರಾಜ್ಯದಲ್ಲಿ ಖಾಸಗಿ ಸಂಸ್ಥೆಗಳ ಬಸ್ಸುಗಳಿಗೆ ಸಂಚರಿಸಲು ಅನುಮತಿ ನೀಡುವಾಗ ಯಾವ ರೀತಿಯ ನಿರ್ಬಂಧಗಳನ್ನು ವಿಧಿಸಲಾಗಿದೆ;

(ಆ) ಖಾಸಗಿ ಬಸ್ಸುಗಳು ಬಸ್ಸಿನ ಮೇಲೆ ದೊಡ್ಡ ಮಟ್ಟದಲ್ಲಿ ವಾಣಿಜ್ಯ ಸರಕುಗಳನ್ನು ಸಾಗಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇದರಿಂದ ಪ್ರಮಾಣಿಕರ ಜೀವ ಹಾನಿಯಾದರೆ ಜವಾಬ್ದಾರಿ ಯಾರು; ಈ ಕುರಿತು ಸರ್ಕಾರದ ನಿಲುವೇನು;

(ಇ) ಖಾಸಗಿ ಬಸ್ಸುಗಳಲ್ಲಿ ಸರಕುಗಳನ್ನು ಸಾಗಿಸಲು ಅನುಮತಿ ನೀಡಲಾಗಿದೆಯೇ; ಇಲ್ಲವಾದ್ದಲ್ಲಿ, ಕಳೆದ 2 ವರ್ಷಗಳಲ್ಲಿ ಈ ಕುರಿತು ಎಷ್ಟು ಪ್ರಕರಣಗಳು ದಾಖಲಾಗಿವೆ; ಎಷ್ಟು ದಂಡ ವಸೂಲಿ ಮಾಡಲಾಗಿದೆ; ಎಷ್ಟು ಖಾಸಗಿ ಬಸ್ಸುಗಳ ಲೈಸೆನ್ಸ್ ರದ್ದುಗೊಳಿಸಲಾಗಿದೆ?